Received on 27/7/202[illegible]
mvp

ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ಶೈವಿ/123/ಕ.ಲೋ.ಆ/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು,ದಿನಾಂಕ:23-07-2021

# ಸುತ್ತೋಲೆ

ವಿಷಯ: ಕರ್ನಾಟಕ ಲೋಕಸೇವಾ ಆಯೋಗವು ನಡೆಸುತ್ತಿರುವ ರಾಜ್ಯದ ವಿವಿಧ ಇಲಾಖೆಗಳಲ್ಲಿನ ಉಳಿಕೆ ಮೂಲ ವೃಂದದ ಮತ್ತು ಹೈದ್ರಾಬಾದ್ ಕರ್ನಾಟಕ ವೃಂದದ ಕಿರಿಯ ಸಹಾಯಕರು/ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸುವ ಬಗ್ಗೆ.

ಉಲ್ಲೇಖ: ಕಾರ್ಯದರ್ಶಿಗಳು ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು ಇವರ ಪತ್ರ ಸಂಖ್ಯೆ: ಪಿಎಸ್.ಸಿ ಇ(3)111/2021-22, ದಿನಾಂಕ:07-07-2021.

*****

ಕರ್ನಾಟಕ ಲೋಕಸೇವಾ ಆಯೋಗವು 2019 ನೇ ಸಾಲಿನಲ್ಲಿ ಅಧಿಸೂಚಿಸಲಾದ ರಾಜ್ಯದ ವಿವಿಧ ಇಲಾಖೆಗಳಲ್ಲಿನ ಉಳಿಕೆ ಮೂಲ ವೃಂದದ ಮತ್ತು ಹೈದ್ರಾಬಾದ್ ಕರ್ನಾಟಕ ವೃಂದದ ಕಿರಿಯ ಸಹಾಯಕರು/ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ ನಿಗದಿಪಡಿಸಲಾದ ಸ್ಪರ್ಧಾತ್ಮಕ ಪರೀಕ್ಷೆಯ ದಿನಾಂಕವನ್ನು ಕೆಲವು ಅನಿವಾರ್ಯ ಕಾರಣಗಳಿಂದಾಗಿ ಮುಂದೂಡಲಾಗಿದ್ದ ಪರೀಕ್ಷೆಯನ್ನು ಪರಿಷ್ಕರಿಸಿ, ಪ್ರಸ್ತುತ ದಿನಾಂಕ: 18-09-2021 ಮತ್ತು 19-09-2021 ರಂದು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ನಡೆಸಲು ನಿಗದಿಪಡಿಸಿದ್ದು, ಪೂರ್ವ ಭಾವಿ ಪರೀಕ್ಷಾ ಸಿದ್ಧತೆಗಳನ್ನು ಕೈಗೊಳ್ಳಲಾಗಿರುತ್ತದೆ. ಆದ್ದರಿಂದ ಸದರಿ ದಿನಾಂಕಗಳಂದು ಇಲಾಖಾ ವ್ಯಾಪ್ತಿಗೊಳಪಡುವ ಜಿಲ್ಲಾ ಕೇಂದ್ರ ತಾಲ್ಲೂಕು ಕೇಂದ್ರದಲ್ಲಿನ ಸರ್ಕಾರಿ/ ಅನುದಾನಿತ ಕಾಲೇಜುಗಳಿಗೆ ಆದ್ಯತೆ ನೀಡಿ ಪರೀಕ್ಷಾ ಉಪ ಕೇಂದ್ರಗಳನ್ನಾಗಿ ನೀಡುವಂತೆ ಆಯೋಗವು ನಡೆಸುವ ಪರೀಕ್ಷೆಗಳನ್ನು ಯಶಸ್ವಿಯಾಗಿ ನಡೆಸಲು ಸಹಕರಿಸಬೇಕೆಂದು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ಇಲಾಖಾ ವ್ಯಾಪ್ತಿಯ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ:18-09-2021, ಮತ್ತು 19-09-2021, ರಂದು ವಿವಿಧ ಹುದ್ದೆಗಳ ನೇಮಕಾತಿಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಹಮ್ಮಿಕೊಂಡಿದ್ದು, ಸದರಿ ದಿನಾಂಕಗಳಂದು ಇತರೇ ಯಾವುದೇ ಪರೀಕ್ಷಾ/ಇತರೆ ಕಾರ್ಯಕ್ರಮಗಳನ್ನು ನಿಗದಿಪಡಿಸದೆ ಕೆ.ಪಿ.ಎಸ್‌ಸಿ ಪರೀಕ್ಷೆಗಳಿಗೆ ಕಾಲೇಜುಗಳ ಕಟ್ಟಡ /ಕೊಠಡಿಗಳನ್ನು ಹಾಗೂ ಇತರೆ ಮೂಲಭೂತ ಸೌಕರ್ಯಗಳನ್ನು ನೀಡಿ ಸಿಬ್ಬಂದಿಗಳ ನೆರವಿನೊಂದಿಗೆ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಲು ಸಹಕರಿಸುವಂತೆ ಸೂಚಿಸಲಾಗಿದೆ.

R. Nagesha
ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರು-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ, ಕಲಬುರಗಿ-ಇವರಿಗೆ ಅಗತ್ಯ ಕ್ರಮವಹಿಸಲು.

ಪ್ರತಿಯನ್ನು:

1. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-560001.-ಮಾಹಿತಿಗಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು- ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
3. ಕಛೇರಿ ಪ್ರತಿ.